ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003.

ಸಂಖ್ಯೆ: ಸಿ1/ SSLC/ಮಾ–ಏ–2023/ಪ.ವೇ.ಪ/109/2022–23 ದಿನಾಂಕ: 18.01.2023

# ಸುತ್ತೋಲೆ

**ವಿಷಯ:** ಮಾರ್ಚ್/ಏಪ್ರಿಲ್–2023ರ ಎಸ್.ಎಸ್‌ಎಲ್.ಸಿ. ಮುಖ್ಯ ಪರೀಕ್ಷೆಯ ಪರಿಷ್ಕೃತ ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸುವ ಕುರಿತು.

**ಉಲ್ಲೇಖ:**
1. ಈ ಕಛೇರಿ ಪತ್ರ ಸಂಖ್ಯೆ: ಸಿ1/SSLC/ಮಾ–ಏ–2023/ಪ.ವೇ.ಪ/109/ 2022–23, ದಿನಾಂಕ: 05.12.2022.
2. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ರಾಜ್ಯ ಶಿಷ್ಟಾಚಾರ), ಕರ್ನಾಟಕ ಸರ್ಕಾರ, ಇವರ ಪತ್ರ ಸಂಖ್ಯೆ: ಸಿಆಸುಇ 16 ಹೆಚ್‌ಹೆಚ್‌ಎಲ್ 2022, ದಿನಾಂಕ: 17.01.2023.

*****

ಮಾರ್ಚ್/ಏಪ್ರಿಲ್–2023ರ ಎಸ್.ಎಸ್‌ಎಲ್.ಸಿ. ಮುಖ್ಯ ಪರೀಕ್ಷೆಯನ್ನು ದಿನಾಂಕ: 31.03.2023 ರಿಂದ 15.04.2023 ರವರೆಗೆ ನಡೆಸಲು ತೀರ್ಮಾನಿಸಿ, ಅಂತಿಮ ವೇಳಾಪಟ್ಟಿಯನ್ನು ಉಲ್ಲೇಖ–1ರಂತೆ ಪ್ರಕಟಿಸಲಾಗಿತ್ತು. ದಿನಾಂಕ:03.04.2023ರಂದು ಮಹಾವೀರ ಜಯಂತಿಯ ಪ್ರಯುಕ್ತ ಘೋಷಿಸಿಲಾಗಿದ್ದ ಸಾರ್ವತ್ರಿಕ ರಜೆಯನ್ನು ದಿನಾಂಕ: 04.04.2023ಕ್ಕೆ ಬದಲಾಯಿಸಿ ಉಲ್ಲೇಖ–2ರಲ್ಲಿ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆ. **ಆದ್ದರಿಂದ ದಿನಾಂಕ: 04.04.2023ರಂದು ನಿಗದಿಯಾಗಿದ್ದ ಎಸ್.ಎಸ್.ಎಲ್.ಸಿ.ಯ ಗಣಿತ ಮತ್ತು ಸಮಾಜ ಶಾಸ್ತ್ರ ವಿಷಯಗಳ ಪರೀಕ್ಷೆಯನ್ನು ದಿನಾಂಕ: 03.04.2023ಕ್ಕೆ ಮರುನಿಗದಿ ಮಾಡಿ ಪರಿಷ್ಕೃತ ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.**

ಸದರಿ ವೇಳಾಪಟ್ಟಿಯನ್ನು ಈ ಪತ್ರಕ್ಕೆ ಲಗತ್ತಿಸಲಾಗಿದ್ದು, ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಶಾಲೆಯ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ವಿದ್ಯಾರ್ಥಿಗಳಿಗೆ ಖುದ್ದಾಗಿ ಗಮನಿಸಲು ಸೂಚಿಸುವುದು. ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಸದರಿ ಪರಿಷ್ಕೃತ ಅಂತಿಮ ವೇಳಾಪಟ್ಟಿಯನ್ನು ಮಂಡಳಿಯ ಅಂತರ್ಜಾಲ www.kseab.karnataka.gov.in ದಿಂದ ಪಡೆದುಕೊಂಡು ತಮ್ಮ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸುವುದು.

18/1/2023

ನಿರ್ದೇಶಕರು (ಪರೀಕ್ಷೆಗಳು)

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರವರಿಗೆ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರವರಿಗೆ.
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
4. ಶಾಖಾಧಿಕಾರಿಗಳು, ಗಣಕ ಶಾಖೆಯವರಿಗೆ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು, ಕರ್ನಾಟಕ ಸರ್ಕಾರ, ಬೆಂಗಳೂರು, ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸುತ್ತಾ, ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಆಪ್ತ ಕಾರ್ಯದರ್ಶಿಗಳು, ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು, ರವರಿಗೆ ಸಲ್ಲಿಸುತ್ತಾ, ಮಾನ್ಯ ಪ್ರಧಾನ ಕಾರ್ಯದರ್ಶಿಗಳರವರ ಅವಗಾಹನೆಗೆ ತರಲು ಕೋರಿದೆ.
3. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
5. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಧಾರವಾಡ ಮತ್ತು ಕಲಬುರಗಿ, ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
6. ನಿರ್ದೇಶಕರು (ಪರೀಕ್ಷೆಗಳು) ಮತ್ತು ಕಾರ್ಯದರ್ಶಿಯವರ ಆಪ್ತ ಶಾಖೆ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ರವರಿಗೆ ಮಾಹಿತಿಗಾಗಿ
7. ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ, ಮೈಸೂರು, ಬೆಳಗಾವಿ ಮತ್ತು ಕಲಬುರಗಿ, ರವರಿಗೆ ಮಾಹಿತಿಗಾಗಿ.
8. ಕಛೇರಿ ಪ್ರತಿ.